## ಸಿವಿಲ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಧೀಶರ ನ್ಯಾಯಾಲಯ, ಯಾದಗಿರಿ.

**ಸಿ.ಸಿ ನಂಃ 621/ 2022**

| | | |
|---|---|---|
| ಸಾಕ್ಷಿಯ ಹೆಸರುಃ | ಶ್ರೀ ಚೆನ್ನಪ್ಪ | ಫ್ರಾಸಾಃ **01** |
| ತಂದೆ ಹೆಸರುಃ | ಬುಗ್ಗಪ್ಪ | ಚಾಸಾಃ **03** |
| ವಯಸ್ಸುಃ | **32** ವರ್ಷ | ದಿಃ **23-02-2026** |
| ಉದ್ಯೋಗಃ | ಮೇಸ್ತ್ರೀ | ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು. |
| ವಾಸ ಸ್ಥಳಃ | ಕೊಂಕಲ್ | |

ಮುಖ್ಯ ವಿಚಾರಣೆ: ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಇವರಿಂದ

ನನಗೆ ಚಾಸಾಃ 2 ರವರ ಪರಿಚಯ ಇದೆ. ನನಗೆ ನ್ಯಾಯಾಲಯದ ಮುಂದೆ ಇರುವ ಆರೋಪಿಯ ಪರಿಚಯವೂ ಸಹ ಇದೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಸಾಕ್ಷಿ ಪಂಚನಾಮೆಯಲ್ಲಿನ ತಮ್ಮ ಸಹಿಯನ್ನು ಈಗ ನೋಡಿ ಗುರುತಿಸಿದ್ದು, ಪಂಚನಾಮೆಯನ್ನು ನಿಪಿ-1 ಹಾಗೂ ಸಾಕ್ಷಿಯ ಸಹಿ ನಿಪಿ-1(ಎ) ಎಂದು ಗುರುತಿಸಲಾಯಿತು. ನಿಪಿ-1 ರ ಪಂಚನಾಮೆಯಲ್ಲಿನ ಅಂಶಗಳ ಬಗ್ಗೆ ನನಗೆ ಮಾಹಿತಿ ಇಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ ಹಾಗೂ ಯಾವುದೇ ವಸ್ತು ಜಪ್ತಿ ಮಾಡಿಕೊಂಡಿಲ್ಲ.

( ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿದಾರರು ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದರು - ಅನುಮತಿ ನೀಡಲಾಯಿತು)

ಪಾಟೀ ಸವಾಲು ಃ ಮಾನ್ಯ ಸ.ಸ.ಅ. ರವರಿಂದಃ

ದಿನಾಂಕಃ 27-01-2022 ರಂದು ಪೊಲಿಸರು ನನ್ನು ಮತ್ತು ಚಾಸಾಃ 2 ರವರನ್ನು ಪಂಚರನ್ನಾಗಿ ಕರೆದುಕೊಂಡು ಚಿನ್ನಾಕಾರ ಗ್ರಾಮದ ಬಸ್ ನಿಲ್ದಾಣದ ಹತ್ತಿರ ದಾಳಿ ಮಾಡಿ ಆರೋಪಿ ಮಾರಾಟ ಮಾಡುತ್ತಿದ್ದ ಮದ್ಯ ದಾಸ್ತಾನನ್ನು ಹಾಗೂ ಆತನ ಹತ್ತಿರ ಇದ್ದ ರೂ. 200/- ನಗದು ಹಣವನ್ನು ಜಪ್ತಿ ಮಾಡಿಕೊಂಡಿದ್ದರು ಎಂದರೆ ಸರಿಯಲ್ಲ. ಸಂಜೆಃ 6.30 ರಿಂದ 7.30 ರವರೆಗೆ ಪೊಲಿಸರು ನಮ್ಮ ಸಮಕ್ಷಮ ನಿಪಿ-1 ರಂತೆ ಸ್ಥಳದಲ್ಲಿ ಪಂಚನಾಮೆಯನ್ನು ಮಾಡಿದ್ದರು ಎಂದರೆ ಸರಿಯಲ್ಲ. ಈ ಎಲ್ಲಾ ವಿಷಯಗಳು

ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು ಆರೋಪಿತರ ಪರಃ ವಕೀಲರವರಿಂದಃ</u>

ಯಾವುದೇ ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

ಮರು ವಿಚಾರಣೆ ಇರುವುದಿಲ್ಲ.

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

ಓ. ಹೇ. ಕೇ. ಸರಿ ಇದೆ.

ಜೆಎಂಎಫ್‌ಸಿ ನ್ಯಾಯಾಧೀಶರು
ಯಾದಗಿರಿ.

**ಸಿವಿಲ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಧೀಶರ ನ್ಯಾಯಾಲಯ, ಯಾದಗಿರಿ.**
**ಸಿ.ಸಿ ನಂಃ 1916/ 2022**

| | | |
|---|---|---|
| ಸಾಕ್ಷಿಯ ಹೆಸರುಃ | ಶ್ರೀ ಶಿವಪ್ಪ | ಫ್ರಾಸಾಃ **02** |
| ತಂದೆ ಹೆಸರುಃ | ನರಸಪ್ಪ | ಚಾಸಾಃ **03** |
| ವಯಸ್ಸುಃ | **50** ವರ್ಷ | ದಿಃ **10-02-2025** |
| ಉದ್ಯೋಗಃ | ಒಕ್ಕಲುತನ | ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು. |
| ವಾಸ ಸ್ಥಳಃ | ನಸಲವಾಯಿ ಗ್ರಾಮ. | |

ಸಾಕ್ಷಿಗೆ ತೆಲುಗು ಭಾಷೆ ಬರುತ್ತದೆ ಕನ್ನಡ ಭಾಷೆ ಬರುವುದಿಲ್ಲ ಎಂದು ಹೇಳಿದ ಮೇರೆಗೆ ಶ್ರೀ ಎಸ್.ಬಿ.ಹೆಚ್ ವಕೀಲರನ್ನು ಭಾಷಾಂತರಕಾರರನ್ನಾಗಿ ನೇಮಿಸಲಾಯಿತು ಹಾಗೂ ಅವರಿಗೆ ಪ್ರಮಾಣ ವಚನ ಭೊದಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ರಜೆಯಲ್ಲಿದ್ದು, ಪ್ರಭಾರಿ ಸ.ಸ.ಅ ರವರು ಗೈರು ಹಾಜರು ಇರುವುದರಿಂದ ನ್ಯಾಯಾಲಯದಿಂದ ಸಾಕ್ಷ ವಿಚಾರಣೆಃ**

ನನಗೆ ಚಾಸಾಃ 2 ರವರ ಪರಿಚಯ ಇದೆ. ನನಗೆ ನ್ಯಾಯಾಲಯದ ಮುಂದೆ ಇರುವ ಆರೋಪಿಯ ಪರಿಚಯವೂ ಸಹ ಇದೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಸಾಕ್ಷಿ ಪಂಚನಾಮೆಯಲ್ಲಿನ ತಮ್ಮ ಹೆಬ್ಬೆಟ್ಟಿನ ಗುರುತನ್ನು ಈಗ ನೋಡಿ ಗುರುತಿಸಿರುತ್ತಾರೆ. ನಿಪಿ-1 ರ ಪಂಚನಾಮೆಯಲ್ಲಿನ ಅಂಶಗಳ ಬಗ್ಗೆ ನನಗೆ ಮಾಹಿತಿ ಇಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ ಹಾಗೂ ಯಾವುದೇ ವಸ್ತು ಜಪ್ತಿ ಮಾಡಿಕೊಂಡಿಲ್ಲ.

ಪಾಟೀ ಸವಾಲು ಆರೋಪಿತರ ಪರಃ ವಕೀಲರವರಿಂದಃ

ಯಾವುದೇ ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ ಃ ಇರುವುದಿಲ್ಲ.

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

ಓ. ಹೇ. ಕೇ. ಸರಿ ಇದೆ.

ಜೆಎಂಎಫ್‌ಸಿ ನ್ಯಾಯಾಧೀಶರು
ಯಾದಗಿರಿ.